ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

# ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015–16 : ಏಪ್ರಿಲ್ 18, 2015

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮದ ವಿವರ | ದಿನಾಂಕ : ಸಮಯ | ಸ್ಥಳ |
|---|---|---|---|
| 1 | ರಾಷ್ಟ್ರೀಯ ಅಗ್ನಿ ಶಾಮಕ ಸೇವಾ ಸಪ್ತಾಹ<br>ಅಗ್ನಿ ಶಾಮಕ ಹಾಗೂ ತುರ್ತು ಸೇವೆಗಳ ಇಲಾಖೆಯಲ್ಲಿ ಇರುವ ವಾಹನಗಳ ಪರಿಚಯ ಮತ್ತು ಅಗ್ನಿಶಾಮಕ ಮುನ್ನೆಚ್ಚರಿಕೆ ಕ್ರಮಗಳ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸಲು ಕಬ್ಬನ್ ಉದ್ಯಾನದಿಂದ ಇಲಾಖಾ ಕೇಂದ್ರ ಕಚೇರಿ ಅಣ್ಣಾಸ್ವಾಮಿ ಮೊದಲಿಯಾರ್ ರಸ್ತೆಯವರೆಗೆ ರ್‍ಯಾಲಿ.<br>ಅಗ್ನಿ ಶಾಮಕ ಸಿಬ್ಬಂದಿ ತುಕಡಿ, ಬ್ಯಾಂಡ್ ಮತ್ತು ವಿವಿಧ ಮಾದರಿಯ ವಾಹನಗಳ ಪ್ರದರ್ಶನ. | 20–04–2015<br>ಸೋಮವಾರ<br>ಬೆಳಿಗ್ಗೆ<br>10–00 ಗಂಟೆ | ಕಬ್ಬನ್ ಉದ್ಯಾನ<br>ಬೆಂಗಳೂರು – 560 001 |

ನಿರ್ದೇಶಕರ ಪರವಾಗಿ

**ಪತ್ರಿಕಾ ಪ್ರಕಟಣೆ**

**ಐ ಎ ಎಸ್ ವರ್ಗಾವರ್ಗಿ : ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಡಳಿತಾಧಿಕಾರಿಯಾಗಿ ಟಿ. ಎಂ. ವಿಜಯಭಾಸ್ಕರ್, ಆಯುಕ್ತರಾಗಿ ಜಿ. ಕುಮಾರ್ ನಾಯಕ್ ನೇಮಕ**

**ಬೆಂಗಳೂರು, ಏಪ್ರಿಲ್ 18 ( ಕರ್ನಾಟಕ ವಾರ್ತೆ ) :**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಡಳಿತಾಧಿಕಾರಿಯಾಗಿ ಶ್ರೀ ಟಿ. ಎಂ. ವಿಜಯಭಾಸ್ಕರ್ ಹಾಗೂ ಆಯುಕ್ತರಾಗಿ ಶ್ರೀ ಜಿ. ಕುಮಾರ್ ನಾಯಕ್ ಅವರನ್ನು ನೇಮಕ ಮಾಡಿ ರಾಜ್ಯ ಸರ್ಕಾರ ಅಧಿಸೂಚನೆ ಹೊರಡಿಸಿದೆ.

ಅಂತೆಯೇ, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿಯ ವ್ಯವಸ್ಥಾಪಕ ನಿರ್ದೇಶಕ ಶ್ರೀ ಪಂಕಜ್ ಕುಮಾರ್ ಪಾಂಡೆ ಅವರನ್ನು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದ ವ್ಯವಸ್ಥಾಪಕ ನಿರ್ದೇಶಕರಾಗಿ ಅಧಿಕ ಪ್ರಭಾರದಲ್ಲಿರಿಸಲಾಗಿದೆ.

ಕೊಡಗು ಜಿಲ್ಲೆಯ ಮಡಿಕೇರಿ ಉಪವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಹಿರಿಯ ಸಹಾಯಕ ಆಯುಕ್ತ ಶ್ರೀ ಅಭಿರಾಮ್ ಜಿ ಶಂಕರ್ ಅವರನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯಲ್ಲಿ ಹೊಸದಾಗಿ ಸೃಜಿಸಲಾದ ಸೇವೆಗಳು-2 ರ ಉಪ ಕಾರ್ಯದರ್ಶಿ ಹುದ್ದೆಗೆ ನೇಮಕ ಮಾಡಲಾಗಿದೆ.

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿದ್ದ ಕರ್ನಾಟಕ ಆಡಳಿತ ಸೇವಾ ಅಧಿಕಾರಿ ಶ್ರೀ ನಂಜುಂಡೇಗೌಡ ಅವರನ್ನು ಕೊಡಗು ಜಿಲ್ಲೆಯ ಮಡಿಕೇರಿ ಉಪವಿಭಾಗಾಧಿಕಾರಿ ಹುದ್ದೆಗೆ ನೇಮಕ ಮಾಡಲಾಗಿದೆ ಎಂದು ಅಧಿಸೂಚನೆಯಲ್ಲಿ ತಿಳಿಸಲಾಗಿದೆ.

***********

ಡಿ ಪಿ ಎಂ : ಎಂ ಕೆ ಎಂ

**ಪತ್ರಿಕಾ ಪ್ರಕಟಣೆ**

## ಏಪ್ರಿಲ್ 20 ರಂದು ವಿಧಾನಸಭೆಯಲ್ಲಿ ಕರ್ನಾಟಕ ನಗರಪಾಲಿಕೆಗಳ (ತಿದ್ದುಪಡಿ) ವಿಧೇಯಕ–2015 ಮಂಡನೆ

**ಬೆಂಗಳೂರು, ಏಪ್ರಿಲ್ 18 ( ಕರ್ನಾಟಕ ವಾರ್ತೆ ) :**

ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಏಪ್ರಿಲ್ 20 ರಂದು ಬೆಳಿಗ್ಗೆ 11–00 ಗಂಟೆಗೆ ಪ್ರಾರಂಭವಾಗಲಿರುವ ರಾಜ್ಯ ವಿಧಾನ ಸಭೆಯಲ್ಲಿ 2015 ನೇ ಸಾಲಿನ ಕರ್ನಾಟಕ ನಗರಪಾಲಿಕೆಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲಿದ್ದಾರೆ ಎಂದು ರಾಜ್ಯ ವಿಧಾನ ಸಭಾ ಕಾರ್ಯದರ್ಶಿ ಶ್ರೀ ಓಂ. ಪ್ರಕಾಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅದೇ ದಿನ ಅಪರಾಹ್ನ 2–00 ಗಂಟೆಗೆ ರಾಜ್ಯ ವಿಧಾನ ಪರಿಷತ್ತು ಸಮಾವೇಶಗೊಳ್ಳಲಿದೆ ಎಂದು ಪರಿಷತ್ ಪ್ರಕಟಣೆ ತಿಳಿಸಿದೆ.

---

**ಪತ್ರಿಕಾ ಪ್ರಕಟಣೆ**

## ಮುಖ್ಯಮಂತ್ರಿ ದೆಹಲಿಗೆ

**ಬೆಂಗಳೂರು, ಏಪ್ರಿಲ್ 18 ( ಕರ್ನಾಟಕ ವಾರ್ತೆ )**

ನವದೆಹಲಿಯಲ್ಲಿ ಏಪ್ರಿಲ್ 19 ರಂದು ನಡೆಯಲಿರುವ ಕಿಸಾನ್ ಖೇತ್ ಮಜ್ದೂರ್ ರ್‍ಯಾಲಿಯಲ್ಲಿ ಪಾಲ್ಗೊಳ್ಳಲು ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಶನಿವಾರ ಸಂಜೆ ದೆಹಲಿಗೆ ಪ್ರಯಾಣ ಬೆಳೆಸಿದರು.

---

**ಡಿ ಪಿ ಎಂ : ಎಂ ಕೆ ಎಂ**